# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸರ್ವಜ್ಞನಗರ ವಿಧಾನ ಸಭಾಕ್ಷೇತ್ರದ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ.30 ಕಾಡುಗೊಂಡನಹಳ್ಳಿಗೆ ಸಂಬಂಧಿಸಿದಂತೆ ದಿನಾಂಕ: 03-09-2022 ರಂದು ಡಾ॥ ವೇದಾವತಿ ನೋಡಲ್ ಅಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಮತ್ತು ವಿಪತ್ತು ನಿರ್ವಹಣಾ ಸಮಿತಿ ಸಭೆಯ ನಡಾವಳಿಗಳು.

ಸಭೆಯಲ್ಲಿ ಹಾಜರಿದ್ದವರ ವಿವರ:-

| ಕ್ರಮ ಸಂಖ್ಯೆ | ಅಧಿಕಾರಿಗಳ ಹೆಸರು | ಪದನಾಮ |
|---|---|---|
| 1 | ಡಾ॥ವೇದಾವತಿ | ನೋಡಲ್ ಅಧಿಕಾರಿಗಳು ಮತ್ತು ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ.30. ಕೆ.ಜಿ.ಹಳ್ಳಿ |
| 2 | ಶ್ರೀ.ನಾಗರಾಜ್ | ಸಹಾಯಕ ಅಭಿಯಂತರರು. & ಸದಸ್ಯ ಕಾರ್ಯದರ್ಶಿಗಳು ವಾರ್ಡ್ ಸಮಿತಿ ವಾರ್ಡ್ ಸಂಖ್ಯೆ.30. ಕೆ.ಜಿ.ಹಳ್ಳಿ. |
| 3 | ಶ್ರೀ.ಹರ್ಷಿತ್ ಕುಮಾರ್ | ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ.30 |
| 4 | ಶ್ರೀ.ಮಣಿಶಂಕರ್ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ.30 |
| 5 | ಶ್ರೀ.ವಿದ್ಯಾಸಾಗರ್ | ಸಹಾಯಕ ಅಭಿಯಂತರರು ಬೆಸ್ಕಾಂ ಇ-1 |
| 6 | ಶ್ರೀ.ವೈ.ಎನ್.ಬಸವರಾಜ್ | Assistant Sub Inspector ಕೆ.ಜಿ.ಹಳ್ಳಿ ಸಂಚಾರಿ ಪೋಲೀಸ್ ಠಾಣೆ |
| 7 | ಶ್ರೀ.ಶಂಕರ್ | ಬೆಸ್ಕಾಂ ಉಪ-ವಿಭಾಗ, ಲೈನ್‌ಮೆನ್ |
| 8 | ಶ್ರೀ.ಅಸ್ಲಂ ಪಾಷಾ | ಹೆಡ್ ಕಾನ್ಸ್ಟೇಬಲ್ ಕೆ.ಜಿ.ಹಳ್ಳಿ ಪೋಲೀಸ್ ಠಾಣೆ |
| 9 | ಶ್ರೀ.ಪಿ.ಬಿ.ಗೌರ್ | ಹೆಡ್ ಕಾನ್ಸ್ಟೇಬಲ್ ಕೆ.ಜಿ.ಹಳ್ಳಿ ಪೋಲೀಸ್ ಠಾಣೆ |
| 10 | ಶ್ರೀ.ಮಂಜುನಾಥ್ | ಕೆಲಸ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 11 | ಶ್ರೀ.ರಾಮಕೃಷ್ಣ.ಆರ್ | ಕಂದಾಯ ನಿರೀಕ್ಷಕರು ವಾರ್ಡ್ ಸಂಖ್ಯೆ.30 |
| 12 | ಶ್ರೀಮತಿ.ಹಸೀನಾ ಬಾನು | ಕಂದಾಯ ವಸೂಲಿಗಾರರು |
| 13 | ಶ್ರೀ.ಸತ್ಯನಾರಾಯಣ | ಹೆಚ್.ಆರ್.ಪಿ.ಜಿ |
| 14 | ಶ್ರೀ.ಪಿ.ಚಂದ್ರಶೇಖರ್ | ಹೆಚ್.ಆರ್.ಪಿ.ಜಿ |

| | | |
|---|---|---|
| 15 | ಶ್ರೀ.ಮೊಹಮ್ಮದ್ ಮಜಹುದ್ದೀನ್ | ಹೆಚ್.ಆರ್.ಪಿ.ಜಿ |
| 16 | ಶ್ರೀಮತಿ.ನಯೀರಾ ಬಾನು | ಅಂಗನವಾಡಿ ಕಾರ್ಯಕರ್ತೆ |
| 17 | ಶ್ರೀ.ಇಫ್ರಾನ್ | ಸ್ಥಳೀಯರು |
| 18 | ಶ್ರೀ.ಫಹೀಮ್ ಖಾನ್ | ಸ್ಥಳೀಯರು |
| 19 | ಶ್ರೀ.ರಮೇಶ್ | ಸ್ಥಳೀಯರು |
| 20 | ಶ್ರೀ.ಎರ್ರನ್ ಕುಮಾರ್ | ಸ್ಥಳೀಯರು |

ವಾರ್ಡ್ ಸಮಿತಿಯ ನೋಡಲ್ ಅಧಿಕಾರಿ ರವರು ಮತ್ತು ಸದಸ್ಯ ಕಾರ್ಯದರ್ಶಿ ರವರು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳನ್ನು ಹಾಗೂ ಸಾರ್ವಜನಿಕರನ್ನು ಸ್ವಾಗತಿಸುವುದರೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

1) ಘನತ್ಯಾಜ್ಯ ನಿರ್ವಹಣೆ:-ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯ 2ನೇ ಮುಖ್ಯರಸ್ತೆ, ಆರೋಕ್ಯಮ್ಮ ಲೇಔಟ್‌ನ ಟ್ರಾನ್ಸ್‌ಫಾರ್ಮ ಬಳಿ ಸಾರ್ವಜನಿಕರು ಕಸವನ್ನು ಎಸೆಯುತ್ತಿದ್ದು, ಸದರಿ ಸ್ಥಳದಲ್ಲಿ ಬ್ಲಾಕ್‌ಸ್ಪಾಟ್ ನಿರ್ಮಾಣಗೊಂಡಿರುತ್ತದೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿನ ಪಾರ್ಕ್‌ಗಳಲ್ಲಿ ಸೊಳ್ಳೆಗಳ ಹಾವಳಿ ಹೆಚ್ಚಾಗಿದ್ದು, ಸೊಳ್ಳೆಗಳ ನಿಯಂತ್ರಣಕ್ಕಾಗಿ ಫಾಗಿಂಗ್ ಅನ್ನು ಸಿಂಪಡಿಸಬೇಕೆಂದು ಸಭೆಯಲ್ಲಿ ತಿಳಿಸಿದರು.

ಸದರಿ ವಿಷಯದ ಬಗ್ಗೆ ಸಭೆಯಲ್ಲಿ ಹಾಜರಿದ್ದ ಶ್ರೀ.ಮಣಿಶಂಕರ್, ಹಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸೂಕ್ತ ಕ್ರಮ ಕೈಗೊಳ್ಳಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

(ಕ್ರಮ :-ಸ.ಕಾ.ಅ ಘನತ್ಯಾಜ್ಯ ನಿರ್ವಹಣೆ ಸರ್ವಜ್ಞನಗರ ವಿಭಾಗ ಬೆಂಗಳೂರು)

2) ಆರೋಗ್ಯ ವೈದ್ಯಾಧಿಕಾರಿಗಳು:- ವಾರ್ಡ್‌ನ ಕೆ.ಜಿ.ಹಳ್ಳಿ ಪ್ರದೇಶದಲ್ಲಿ 18 ವಯಸ್ಸು ಮೇಲ್ಪಟ್ಟ ಎಲ್ಲಾ ಸಾರ್ವಜನಿಕರಿಗೂ ಬೂಸ್ಟರ್ ಡೋಸ್‌ಗಳನ್ನು ನೀಡಲು ಹಾಗೂ ಅವಶ್ಯಕವಿದ್ದಲ್ಲಿ ಕ್ಯಾಂಪ್ ವ್ಯವಸ್ಥೆ ಮಾಡಲು ನೋಡಲ್ ಅಧಿಕಾರಿಗಳು ರವರು ಸಭೆಯಲ್ಲಿ ತಿಳಿಸಿದರು ಹಾಗೂ ಶುಶ್ರೂಶಕರು ಹಾಗೂ ಆಶಾ ಕಾರ್ಯಕರ್ತೆಯರನ್ನು ಸರ್ಕಾರಿ ಶಾಲೆ, ಖಾಸಗಿ ಶಾಲೆ ಮತ್ತು ಅಂಗನವಾಡಿ ಕೇಂದ್ರಗಳಿಗೆ ಆರೋಗ್ಯ ತಪಾಸಣೆ ನಡೆಸಬೇಕೆಂದು ಹಾಗೂ ವಾರ್ಡ್‌ನ ವ್ಯಾಪ್ತಿಯಲ್ಲಿ ಫಾಗಿಂಗ್ ಮತ್ತು ಸ್ಪ್ರೇಯಿಂಗ್ ಸಿಂಪಡಿಸಬೇಕೆಂದು ಹಾಗೂ ಡೇಂಗ್ಯೂ ಜ್ವರದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಬೇಕೆಂದು ಸಭೆಯಲ್ಲಿ ತಿಳಿಸಿರುತ್ತಾರೆ.

(ಕ್ರಮ:- ಆರೋಗ್ಯ ವೈದ್ಯಾಧಿಕಾರಿಗಳು ಸರ್ವಜ್ಞನಗರ ವಿಭಾಗ ಬಿ.ಬಿ.ಎಂ.ಪಿ)

3) ಬೀದಿ ದೀಪಗಳ ನಿರ್ವಹಣೆ ಬಗ್ಗೆ:-ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿನ ಬೀದಿ ದೀಪಗಳು ದುಸ್ಥಿತಿಯಲ್ಲಿದ್ದು, ಇದರಿಂದಾಗಿ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ವಿದ್ಯುತ್ ವಿಭಾಗ ಅಧಿಕಾರಿಗಳಿಗೆ ತಿಳಿಸಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

(ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ವಿಭಾಗ ಬಿ.ಬಿ.ಎಂ.ಪಿ)

4) ನೀರು ಸರಭರಾಜು ಮತ್ತು ಒಳಚರಂಡಿ ವ್ಯವಸ್ಥೆ ಬಗ್ಗೆ (ಬಿ.ಡಬ್ಲ್ಯೂ.ಎಸ್.ಎಸ್.ಬಿ):- ವಾರ್ಡ್ ಕೆ.ಜಿ.ಹಳ್ಳಿ ವ್ಯಾಪ್ತಿಯಲ್ಲಿನ ನೀರು ಸರಭರಾಜು ಮಾಡುವ ವೇಳಾಪಟ್ಟಿಯನ್ನು ನೀಡಲು ಸಭೆಯಲ್ಲಿ ತಿಳಿಸಿದರು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿನ ಪಿಳ್ಳಣ್ಣಗಾರ್ಡನ್‌ನಲ್ಲಿ ಸಮಯಕ್ಕೆ ಸರಿಯಾಗಿ ನೀರು ಸರಬರಾಜು ಆಗುತ್ತಿಲ್ಲವೆಂದು ಸಭೆಯಲ್ಲಿ ತಿಳಿಸಿದರು.

ಈ ಬಗ್ಗೆ ಸ್ಥಳ ಪರಿಶೀಲಿಸಿ ಕ್ರಮ ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಶ್ರೀ.ಮಂಜುನಾಥ್, ಕೆಲಸ ಪರಿವೀಕ್ಷಕರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ತಿಳಿಸಿರುತ್ತಾರೆ ಹಾಗೂ ಸದರಿ ವಿಷಯದ ಬಗ್ಗೆ ಕ್ರಮ ಕೈಗೊಂಡು ಮುಂದಿನ ಸಭೆಯಲ್ಲಿ ಮಾಹಿತಿ ಸಲ್ಲಿಸಬೇಕೆಂದು ವಾರ್ಡ್‌ನ ನೊಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

(ಕ್ರಮ :- ಸ.ಕಾ.ಅ.ಬಿ.ಡಬ್ಲ್ಯು.ಎಸ್.ಎಸ್.ಬಿ ಉಪ-ವಿಭಾಗ, ಫ್ರೆಜರ್‌ಟೌನ್)

5) ಕಾಮಗಾರಿ ಇಲಾಖೆ:- ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿನ ಪಿಳ್ಳಣ್ಣಗಾರ್ಡನ್‌ನ 8ನೇ ಮುಖ್ಯರಸ್ತೆಯಲ್ಲಿ ರಸ್ತೆ ಗುಂಡಿಗಳಿದ್ದು, ಅದನ್ನು ಕೂಡಲೇ ಮುಚ್ಚಬೇಕೆಂದು ತಿಳಿಸಿರುತ್ತಾರೆ ಹಾಗೂ ಪಿಳ್ಳಣ್ಣಗಾರ್ಡನ್ 10ನೇ ಮತ್ತು 11ನೇ ಅಡ್ಡರಸ್ತೆಗಳಲ್ಲಿ ಹಾಗೂ 6ನೇ ಮುಖ್ಯರಸ್ತೆಯಲ್ಲಿ ಚರಂಡಿಗಳಲ್ಲಿನ ಹೂಳನ್ನು ತೆಗೆಯಬೇಕೆಂದು ಸಭೆಯಲ್ಲಿ ತಿಳಿಸಿರುತ್ತಾರೆ ಹಾಗೂ ವಿನೋಭನಗರ ಬಿ.ಎಂ.ಲೇಔಟ್‌ನಲ್ಲಿನ ಕೊಳವೆ ಬಾವಿಗಳಿಂದ ಪೈಪ್‌ಲೈನ್ ಸಂಪರ್ಕವನ್ನು ಕಲ್ಪಿಸಿ ನೀರು ಸರಬರಾಜು ಮಾಡಲು ಸಭೆಯಲ್ಲಿ ತಿಳಿಸಿರುತ್ತಾರೆ ಹಾಗೂ ವಿನೋಭನಗರ ಕ್ವಾಟ್ರರ್ಸ್‌ನಲ್ಲಿ ಅಳವಡಿಸಲಾಗಿರುವ ಸಿ.ಸಿ.ಟಿ.ವಿ.ಗಳು ಹಾಗೂ ಇನ್ನಿತರೆ ಕಡೆಗಳಲ್ಲಿ ಸಿ.ಸಿ.ಟಿ.ವಿ.ಗಳು ಕಾರ್ಯನಿರ್ವಹಿಸುತ್ತಿಲ್ಲವೆಂದು ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ಕ್ರಮ ಕೈಗೊಳ್ಳಲು ವಾರ್ಡ್‌ನ ನೊಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

(ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಬಿ.ಆರ್ ಲೇಔಟ್ ಉಪ- ವಿಭಾಗ ಬಿ.ಬಿ.ಎಂ.ಪಿ)

6) ಬೆಸ್ಕಾಂ ವಿಭಾಗ:- ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯ ವಿನೋಭನಗರದ ಕಾರ್ಪೋರೇಟರ್ ಕಛೇರಿಯ ಪಕ್ಕದಲ್ಲಿ ಅಳವಡಿಸಲಾಗಿರುವ ಟ್ರಾನ್ಸ್‌ಫಾರ್ಮರ್ ಅನ್ನು ಬೇರೆ ಕಡೆಗೆ ಸ್ಥಳಾಂತರಿಸಲು ಸಭೆಯಲ್ಲಿ ತಿಳಿಸಿರುತ್ತಾರೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ತಂತಿಗಳು ಮರದ ಕೊಂಬೆಗಳ ಮೇಲೆ ಬೀಳುತ್ತಿದ್ದು ಅವಘಡಗಳು ಸಂಭವಿಸುವ ಸಾಧ್ಯತೆಯಿರುತ್ತದೆ. ಕೂಡಲೇ ಅವುಗಳನ್ನು ತೆರವುಗೊಳಿಸುವಂತೆ ಸಭೆಯಲ್ಲಿ ತಿಳಿಸಿದರು.

ಸದರಿ ವಿಷಯದ ಬಗ್ಗೆ ಸ್ಥಳ ಪರಿಶೀಲಿಸಿ ಕ್ರಮ ಕೈಗೊಳ್ಳಲು ಬೆಸ್ಕಾಂ ವಿಭಾಗದವರಿಗೆ ವಾರ್ಡ್‌ನ ನೊಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

(ಕ್ರಮ:- ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ವಿಭಾಗ)

7) ಕಂದಾಯ ಇಲಾಖೆ:- ವಾರ್ಡ್ ವ್ಯಾಪ್ತಿಯಲ್ಲಿ ವಾರ್ಡ್ ವಿಂಗಣೆಯಾಗಿದ್ದು, ಮತದಾರರ ಪರಿಷ್ಕರಣ ಪಟ್ಟಿ ಹಾಗೂ ಮತದಾರರ ಪಟ್ಟಿಗೆ ಸರ್ವೇ ಕಾರ್ಯ ನಡೆಯುತ್ತಿದ್ದು, ಮತದಾರರ ಪಟ್ಟಿಯಲ್ಲಿ ಅದಲು-ಬದಲಾಗಿದ್ದು, ಅದನ್ನು ಸರಿಪಡಿಸಲು ಕಂದಾಯ ಇಲಾಖೆಯವರಿಗೆ ತಿಳಿಸಬೇಕೆಂದು ಮತ್ತು ಮತದಾರರ ಗುರುತಿನ ಚೀಟಿ ಹಾಗೂ ಲಿಂಕ್ ಮಾಡುವ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಸಭೆಯಲ್ಲಿ ತಿಳಿಸಿದರು.

(ಕ್ರಮ : ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಬಿ.ಆರ್ ಲೇಔಟ್ ಉಪ-ವಿಭಾಗ)

8) ಅರಣ್ಯ ಇಲಾಖೆ:- ವಾರ್ಡ್ ವ್ಯಾಪ್ತಿಯ ಪಿಳ್ಳಣ್ಣಗಾರ್ಡನ್ 5ನೇ ಮುಖ್ಯರಸ್ತೆ, ದೇವರಾಜ್ ಅರಸ್ ರಸ್ತೆ, ಟೆಲಿಗ್ರಾಫ್ ಸ್ಟ್ರೀಟ್‌ನಲ್ಲಿ 2 ಮರಗಳು ಬೀಳುವ ಸ್ಥಿತಿಯಲ್ಲಿದ್ದು, ಮರಗಳನ್ನು ತೆರವುಗೊಳಿಸಲು ಹಾಗೂ ಪಿಳ್ಳಣ್ಣಗಾರ್ಡನ್ ಪ್ರದೇಶದ ಹಲವು ರಸ್ತೆಗಳಲ್ಲಿ ಮರಗಳ ಕೊಂಬೆಗಳನ್ನು ಕತ್ತರಿಸಲು ಸಭೆಯಲ್ಲಿ ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ಯಾವುದೇ ವಾರ್ಡ್ ಸಮಿತಿ ಸಭೆಗೆ ಹಾಜರಾಗಿರದ ಅರಣ್ಯ ಇಲಾಖೆಯ ಅಧಿಕಾರಿಗಳನ್ನು ಮುಂದಿನ ವಾರ್ಡ್ ಸಮಿತಿ ಸಭೆಗೆ ತಪ್ಪದೆ ಹಾಜರಾಗಲು ಸೂಚಿಸಿರುತ್ತಾರೆ.

(ಕ್ರಮ:- ವಲಯ ಅರಣ್ಯಾಧಿಕಾರಿಗಳು ಪೂರ್ವ ಬಿ.ಬಿ.ಎಂ.ಪಿ)

9) <u>ಕಾನೂನು ಸುವ್ಯವಸ್ಥೆ (ಪೋಲೀಸ್ ಇಲಾಖೆ)–</u> ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯ ಪಿಳ್ಳಣ್ಣಗಾರ್ಡನ್‌ನಲ್ಲಿ ಮನೆಯ ಅಂಗಳದಲ್ಲಿನ ಮೋಟರ್‌ಗಳು ಹಾಗೂ ಪಿ.ವಿ.ಸಿ ಪೈಪ್‌ಗಳು ಕಳ್ಳತನವಾಗುತ್ತಿವೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ. ಹಾಗೂ ಹಿಂದೂ ರುದ್ರಭೂಮಿಯ ಸುತ್ತಮುತ್ತ ಕೆಲವು ಕಿಡಿಗೇಡಿಗಳು ಕಾನೂನು ಬಾಹಿರ ಚಟುವಟಿಕೆಯನ್ನು ನಡೆಸುತ್ತಿದ್ದಾರೆಂದು ಹಾಗೂ ಹಿಂದೂ ರುದ್ರಭೂಮಿಯ ಸುತ್ತಮುತ್ತಲು ದುಸ್ಥಿತಿಯಲ್ಲಿರುವ ವಾಹನಗಳನ್ನು ಹಾಗೆಯೇ ರಸ್ತೆಯ ಬದಿಯಲ್ಲಿ ಬಿಟ್ಟಿರುವುದರಿಂದ ಸದರಿ ಸ್ಥಳದಲ್ಲಿ ಮಾದಕ ವಸ್ತುಗಳ ಸೇವನೆ ಹೆಚ್ಚಾಗಿದೆಯೆಂದು ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ಕೂಡಲೆ ಸೂಕ್ತ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.

<u>(ಕ್ರಮ: ಆರಕ್ಷಕ ವೃತ್ತ ನಿರೀಕ್ಷಕರು ಕೆ.ಜಿ.ಹಳ್ಳಿ ಪೋಲೀಸ್ ಠಾಣೆ)</u>

10) <u>ಕಾನೂನು ಸುವ್ಯವಸ್ಥೆ (ಸಂಚಾರಿ ಪೋಲೀಸ್ ಇಲಾಖೆ)–</u> ಕೆ.ಜಿ.ಹಳ್ಳಿ ವಾರ್ಡ್ ವ್ಯಾಪ್ತಿಯ ಬಿಲಾಲ್ ಮಸೀದಿಯ ಹತ್ತಿರ ಮೆಟ್ರೋ ಕಾಮಗಾರಿ ಜಾರಿಯಲ್ಲಿದ್ದು, ರಸ್ತೆಯ ಎರಡೂ ಬದಿಯಲ್ಲಿ ವಾಹನಗಳ ನಿಲುಗಡೆ ಮಾಡುತ್ತಿದ್ದು, ಇದರಿಂದಾಗಿ ಸಾರ್ವಜನಿಕರಿಗೆ ಹಾಗೂ ಶಾಲಾ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ ಹಾಗೂ ಹಿಂದೂ ರುದ್ರಭೂಮಿಯ ಸುತ್ತಮುತ್ತಲು ದುಸ್ಥಿತಿಯಲ್ಲಿರುವ ವಾಹನಗಳನ್ನು ಹಾಗೆಯೇ ರಸ್ತೆಯ ಬದಿಯಲ್ಲಿ ಬಿಟ್ಟುಹೋಗಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.

ಸದರಿ ವಿಷಯದ ಬಗ್ಗೆ ಕೂಡಲೆ ಕ್ರಮ ಕೈಗೊಳ್ಳುವಂತೆ ಸಂಚಾರಿ ಪೋಲೀಸ್ ಠಾಣೆ ರವರಿಗೆ ವಾರ್ಡ್‌ನ ನೋಡಲ್ ಅಧಿಕಾರಿರವರು ಸೂಚಿಸಿರುತ್ತಾರೆ.

<u>(ಕ್ರಮ: ಆರಕ್ಷಕ ವೃತ್ತ ನಿರೀಕ್ಷಕರು ಕೆ.ಜಿ.ಹಳ್ಳಿ ಪೋಲೀಸ್ ಠಾಣೆ)</u>

ಮುಂದುವರೆದು ದಿನಾಂಕ: 03.09.2022 ರಂದು ವಾರ್ಡ್ ಸಮಿತಿ ಸಭೆಗೆ ಗೈರು ಹಾಜರಾಗಿರುವ ಅಧಿಕಾರಿಗಳನ್ನು ಮುಂದಿನ ವಾರ್ಡ್ ಸಮಿತಿ ಸಭೆಗೆ ತಪ್ಪದೇ ಹಾಜರಾಗಲು ತಿಳಿಸಲಾಗಿದೆ. ತಪ್ಪಿದ್ದಲ್ಲಿ ಮೇಲಾಧಿಕಾರಿಗಳಿಗೆ ವರದಿ ಮಾಡಲು ವಾರ್ಡ್‌ನ ನೋಡಲ್ ಅಧಿಕಾರಿ ರವರು ಸೂಚಿಸಿರುತ್ತಾರೆ.

ಸಭೆಯಲ್ಲಿ ಹಾಜರಿದ್ದ ಎಲ್ಲರನ್ನು ವಂದಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಂದನೆಗಳೊಂದಿಗೆ,

ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿಗಳು
ವಾರ್ಡ್ ಸಂಖ್ಯೆ.30.ಕೆ.ಜಿ.ಹಳ್ಳಿ

ನೋಡಲ್ ಅಧಿಕಾರಿ & ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ.30.ಕೆ.ಜಿ.ಹಳ್ಳಿ

<u>ಪ್ರತಿಯನ್ನು:</u>

1. ಮಾನ್ಯ ಶಾಸಕರು, ಸರ್ವಜ್ಞನಗರ ವಿಧಾನ ಸಭಾಕ್ಷೇತ್ರ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಪೂರ್ವ) ವಲಯ ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಕೌನ್ಸಿಲ್ ಕಾರ್ಯದರ್ಶಿಗಳು ಬಿ.ಬಿ.ಎಂ.ಪಿ ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು ಸರ್ವಜ್ಞನಗರ ವಿಭಾಗ ರವರ ಅವಗಾಹನೆಗೆ ಕಳುಹಿಸಿದೆ.
7. ಕಾರ್ಯಪಾಲಕ ಅಭಿಯಂತರರು ವಿದ್ಯುತ್ ವಿಭಾಗ, ರವರ ಅವಗಾಹನೆಗೆ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಉಪ-ವಿಭಾಗ ಪಿಳ್ಳಣ್ಣಗಾರ್ಡನ್ ಕೆ.ಜಿ.ಹಳ್ಳಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

9. ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ ಫ್ರೆಜರ್‌ಟೌನ್ ಉಪ-ವಿಭಾಗ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ನಿರ್ವಹಣೆ ಸರ್ವಜ್ಞನಗರ ವಿಭಾಗರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ಹೆಚ್.ಬಿ.ಆರ್ ಲೇಔಟ್ ಉಪ- ವಿಭಾಗ ಬಿ.ಬಿ.ಎಂ.ಪಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
12. ಸಹಾಯಕ ಕಂದಾಯ ಅಧಿಕಾರಿ ಹೆಚ್.ಬಿ.ಆರ್ ಉಪವಿಭಾಗ ರವರಿಗೆ ಸಲ್ಲಿಸಿದೆ.
13. ಆರಕ್ಷಕ ವೃತ್ತ ನಿರೀಕ್ಷಕರು (ಕಾನೂನು ಮತ್ತು ಸುವ್ಯವಸ್ಥೆ) ಕೆ.ಜಿ.ಹಳ್ಳಿ ಪೊಲೀಸ್‌ಠಾಣೆರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
14. ಆರಕ್ಷಕ ವೃತ್ತ ನಿರೀಕ್ಷಕರು ಸಂಚಾರಿ ಪೊಲೀಸ್ ಠಾಣ್ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
15. ಉಪ-ಅರಣ್ಯಾಧಿಕಾರಿಗಳು ಬಿ.ಬಿ.ಎಂ.ಪಿ ಪೂರ್ವ ವಲಯ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
16. ಆರೋಗ್ಯ ವೈಧ್ಯಾಧಿಕಾರಿಗಳು ಸರ್ವಜ್ಞನಗರ ವಿಭಾಗ ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
17. ಕಛೇರಿ ಕಡತಕ್ಕೆ.